# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 477 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | : | 12.12.2024 |
| **ಉತ್ತರಿಸುವ ಸಚಿವರು** | : | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕೇಂದ್ರ ಕಾಮಗಾರಿ ಪ್ರಾರಂಭವಾಗಿದ್ದು ಯಾವಾಗ: | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕಾಮಗಾರಿಯನ್ನು 2013-14ನೇ ಸಾಲಿನಲ್ಲಿ ರೂ.268.04 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಪ್ರಾರಂಭಿಸಲಾಗಿತ್ತು. ತದನಂತರ, ಈ ಹೆರಿಟೇಜ್ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ಟಿಓಆರ್/ 84/ ಟಿಡಿಪಿ/ 2020, ದಿನಾಂಕ:27-05-2020 ರನ್ವಯ ರೂ.330.45 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಪರಿಷ್ಕೃತ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. |
| ಆ) | ಈ ಹೆರಿಟೇಜ್ ಕೇಂದ್ರದ ಕಾಮಗಾರಿಗೆ ಒಟ್ಟು ಮೀಸಲಿರಿಸಿದ ಅನುದಾನ ಎಷ್ಟು; | |
| ಇ) | ಸದರಿ ಕಾಮಗಾರಿಯನ್ನು ಪ್ರಾರಂಭ ಮಾಡಿದ್ದು ಯಾವಾಗ; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ: ಕಾಮಗಾರಿಯು ವಿಳಂಬವಾಗಲು ಕಾರಣವೇನು; | ಸದರಿ ಅಂದಾಜುಪಟ್ಟಿಯಲ್ಲಿರುವಂತೆ, 2 ಸಂಖ್ಯೆಯ ಐನ್ ಮನೆಗಳು ನಿರ್ಮಾಣ (ಅಡಿಗೆಮನೆ, ದೊಡ್ಡ ಹಾಲ್, ಲೈಬ್ರರಿ) ಬಯಲು ರಂಗಮಂದಿರ, ವಾಟರ್ ಟ್ಯಾಂಕ್ ಅಪ್ಪರ್ & ಲೋವರ್ ಡಿಸ್ ಪ್ಲೇ ಭಾಗದ ತಡೆಗೋಡೆ ನಿರ್ಮಾಣ ಇತರೆ ಭಾಗಗಳಿಗೆ ಸಂಪರ್ಕ ಕಲ್ಪಿಸಲು ಮೆಟ್ಟಿಲು ನಿರ್ಮಾಣ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಪೂರ್ಣಗೊಳಿಸಲಾಗಿರುತ್ತದೆ. |
| ಈ) | ಈ ಕಾಮಗಾರಿಯನ್ನು ಪೂರ್ಣಗೊಳಿಸಿ ಹೆರಿಟೇಜ್ ಸೆಂಟರ್ ಅನ್ನು ಲೋಕಾರ್ಪಣೆ ಮಾಡಲು ಇನ್ನು ಎಷ್ಟು ಸಮಯ ಬೇಕಾಗಬಹುದು? | ಕೊಡವ ಹೆರಿಟೇಜ್ ಸೆಂಟರ್ ಕಾಮಗಾರಿಯನ್ನು ಪೂರ್ಣ ಪ್ರಮಾಣದಲ್ಲಿ ಪೂರ್ಣಗೊಳಿಸಲು ರೂ.495.00 ಲಕ್ಷಗಳಿಗೆ ಪೂರಕ ಅಂದಾಜುಪಟ್ಟಿಯನ್ನು ತಯಾರಿಸಿ ಅನುಮೋದನೆ ಹಾಗೂ ಹೆಚ್ಚುವರಿ ಅನುದಾನ ಬಿಡುಗಡೆಗಾಗಿ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಕೊಡಗು ಜಿಲ್ಲೆ, ಮಡಿಕೇರಿ ಇವರು ಕೋರಿದ್ದು, ಅಗತ್ಯವಿರುವ ಹೆಚ್ಚುವರಿ ಅನುದಾನ ರೂ.495.00 ಲಕ್ಷಗಳನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡದೇ |

| | | |
|---|---|---|
| | | ಇರುವುದರಿಂದ ಸದರಿ ಕಾಮಗಾರಿಗಳನ್ನು ಸಿ.ಎಸ್.ಆರ್ (Corporate Social Responsibility) ಅಡಿಯಲ್ಲಿ ಕೈಗೊಳ್ಳಲು ಅಗತ್ಯ ಕ್ರಮವಹಿಸಲು ಕೋರಿ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಕೊಡಗು ಜಿಲ್ಲೆ, ಮಡಿಕೇರಿ ಇವರನ್ನು ಕೋರಿದ್ದು ಜಿಲ್ಲಾಧಿಕಾರಿಗಳು ಕ್ರಮವಹಿಸಬೇಕಾಗಿದೆ. |

**ಸಂಖ್ಯೆ:ಟಿಓಆರ್ 263 ಟಿಡಿವಿ 2024**

**(ಎಚ್.ಕೆ. ಪಾಟೀಲ್)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು